<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

<u>ಸಿ.ಸಿ. ಸಂಖ್ಯೆ **783/2025**</u>

<u>ಪಿರ್ಯಾದಿ</u> : ಶ್ರೀ ಕೆ.ಎಲ್.ಶಿವಪ್ರಕಾಶ್,
ವಯಸ್ಸು ಸುಮಾರು 47 ವರ್ಷ,
ಬಿನ್ ಕೆ.ಎಸ್.ಲಕ್ಷ್ಮಣಗೌಡ,
ವಾಸಃ ಕುನ್ನಹಳ್ಳಿ ಗ್ರಾಮ,
ಹಳಸೆ ಅಂಚೆ, ಮೂಡಿಗೆರೆ ತಾಲ್ಲೂಕು.

ವಿರುದ್ಧ

<u>ಆರೋಪಿ</u> : ಶ್ರೀ ವಸಂತ್ ಕುಮಾರ್.ಎ.ಜಿ,
ವಯಸ್ಸು ಸುಮಾರು 54 ವರ್ಷ,
ಬಿನ್ ಗೋಪಾಲಕೃಪ ಯಾನೆ ಗೋಪಾಲಕೃಷ್ಣ,
ವಾಸಃ ಜನ್ನಾಪುರ, ಜಿ.ಅಗ್ರಹಾರ ಗ್ರಾಮ ಮತ್ತು ಅಂಚೆ,
ಗೋಣಿಬೀಡು ಹೋಬಳಿ, ಮೂಡಿಗೆರೆ ತಾಲ್ಲೂಕು.

<u>ಆಪಾದನೆಯ ಸಾರಾಂಶ</u>

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಪಿರ್ಯಾದುದಾರರನ್ನು ದಿನಾಂಕ 30.09.2024 ರಂದು ಸಂಪರ್ಕಿಸಿ, ನಿಮ್ಮ ಕುಟುಂಬದ ಅವಶ್ಯಕತೆಗಳಿಗಾಗಿ ಅವರಿಂದ ದಿನಾಂಕ 20.10.2024 ರಂದು 1,20,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಹಣದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಕರ್ನಾಟಕ ಗ್ರಾಮೀಣ ಬ್ಯಾಂಕ್, ಜನ್ನಾಪುರ ಶಾಖೆಯ ಚೆಕ್ ಸಂಖ್ಯೆ 005185, ದಿನಾಂಕ 20.12.2024, ರೂ.1,20,000/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಬ್ಯಾಂಕ್ ಆಫ್ ಬರೋಡಾ, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ (Funds Insufficient) ಎಂದು ಹಿಂಬರಹ ನೀಡಿರುತ್ತಾರೆ. ಕಾರಣ, ಫಿರ್ಯಾದಿಯು ದಿನಾಂಕ 04.01.2025 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ?

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ? ಅದು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

*(ದಿನಾಂಕ 22.11.2025 ರಂದು ಆಪಾದನೆಯ ಸಾರಾಂಶವನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)*

**Sd/-**

ಮೂಡಿಗೆರೆ
ದಿನಾಂಕಃ 22.11.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ, ಮೂಡಿಗೆರೆ.**